





ಶ್ರೀರಾಮ ಪ್ರೌಢಶಾಲೆಯ ವಿದ್ಯಾರ್ಥಿಗಳು ಶಾಲಾ ಪರಿಸರದಲ್ಲಿ ವಿವಿಧ ಗಿಡಗಳನ್ನು ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ದಿನಾಂಕ 05.06.2014ರಂದು ಆಚರಿಸಲಾಯಿತು. ಈ ಸಂದರ್ಭದಲ್ಲಿ ಪರಿಸರ ಸಂಘದ ವತಿಯಿಂದ ಗಿಡ ನೆಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಮುಖ್ಯ ಅತಿಥಿಯಾಗಿ ಪ್ರಗತಿಪರ ಕೃಷಿಕ ಕೃಷ್ಣಭಟ್ ಗಿಲ್ಕಿಂಜ ಅವರು ಅರಶಿನ ಗಿಡವನ್ನು ನೆಡುವ ಮೂಲಕ ಪರಿಸರ ಸಂಘವನ್ನು ಉದ್ಘಾಟಿಸಿದರು.

ಶಾಲಾ ಮುಖ್ಯೋಪಾಧ್ಯಾಯರಾದ ವಸಂತಮಾಧವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಭಾರತೀಯ ಸಂಸ್ಕೃತಿಯಲ್ಲಿ ಪ್ರಕೃತಿಯ ಬಗ್ಗೆ ವಿಶೇಷ ಕಾಳಜಿ ಪುರಾತನ ಕಾಲದಿಂದಲೂ ಕಾಣುತ್ತಿದ್ದೇವೆ. ನೈಸರ್ಗಿಕ ಸಂಪನ್ಮೂಲಗಳನ್ನು ಸ್ವಾರ್ಥಕ್ಕಾಗಿ ಅತಿಯಾಗಿ ಬಳಸಿ ಹಾಳು ಮಾಡುತ್ತಿರುವುದು ಅನೇಕ ಸಮಸ್ಯೆಗಳಿಗೆ ಕಾರಣವಾಗಿದೆ. ಪರಿಸರವನ್ನು ರಕ್ಷಿಸಿ ಉಳಿಸುವುದು ಪ್ರತಿಯೊಬ್ಬನ ಜವಾಬ್ದಾರಿಯಾಗಿದೆ ಎಂದರು.

ಪರಿಸರ ದಿನಾಚರಣೆಯ ಮಹತ್ವವನ್ನು ಕು॥ ವೆನಿಲ್ಲಾ ವಿವರಿಸಿದರು. ವಿದ್ಯಾರ್ಥಿಗಳಾದ ಯಜ್ಞೇಶ, ಸುಜಿತ್ ಔಷದೀಯ ಸಸ್ಯಗಳ ಪರಿಚಯ ಮಾಡಿ ಅವುಗಳ ಉಪಯೋಗಗಳ ಬಗ್ಗೆ ತಿಳಿಸಿದರು. ವಿದ್ಯಾರ್ಥಿಗಳು ಪರಿಸರ ಗೀತೆಯನ್ನು ಹಾಡಿದರು. ಶಾಲಾ ಪರಿಸರದಲ್ಲಿ ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಸಂಕಲ್ಪ ಮಾಡಿದರು. ಶಾಲಾ ವನಕ್ಕೆ ಭೇಟಿ ನೀಡಿ ವಿವಿಧ ಗಿಡಗಳ ಪರಿಚಯ ಮಾಡಿಕೊಂಡು ಅವುಗಳನ್ನು ಪಾಲನೆ ಮಾಡಿಕೊಳ್ಳುವ ಜವಾಬ್ದಾರಿ ವಹಿಸಿಕೊಂಡರು.

ಬಂಟ್ವಾಳ ತಾಲೂಕು ಕನ್ನಡ ಪರಿಷತ್‌ನ ಅಧ್ಯಕ್ಷ ಜಯಾನಂದ ಪೆರಾಜೆ, ಪರಿಸರ ಸಂಘದ ನಿರ್ದೇಶಕಿ ಗಾಯತ್ರಿ ಕೆದಿಲ, ಶಿಕ್ಷಕರಾದ ಜಿನ್ನಪ್ಪ ಏಳ್ತಿಮಾರ್, ಗೋಪಾಲ ಅಮ್ಟೂರು, ಕೊಟ್ರೇಶಪ್ಪ ಉಪಸ್ಥಿತರಿದ್ದರು. ಕು॥ ಅನ್ನಪೂರ್ಣ ಸ್ವಾಗತಿಸಿ, ಹೇಮಂತ್ ನಿರೂಪಿಸಿದರು, ಸಾಕ್ಷ್ಯ ವಂದಿಸಿದರು.